(5)
(7)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃ ಬೆಂ ಮ ಪಾ/ಕಾ ಪಾ ಅ/ದಾ ವ/ಆ ಅ/27/19-20

ಕಾರ್ಯಪಾಲಕ ಅಭಿಯಂತರರು(ವಿ)ರವರ ಕಛೇರಿ
ಬೃ.ಬೆಂ.ಮ.ಪಾ, ದಾಸರಹಳ್ಳಿ ವಲಯ
ಹೆಸರಘಟ್ಟ ರಸ್ತೆ, ಬೆಂಗಳೂರು-73.
ದಿನಾಂಕ: 20-12-2019

ಆಡಳಿತಾತ್ಮಕ ಮಂಜೂರಾತಿ

ವಿಷಯ:- **Annual Maintanance of Street lights Package D-3 ward No 14 Bagalagunte**

ಉಲ್ಲೇಖ:- 1. ಆಯುಕ್ತರ ಆದೇಶ ಸಂಖ್ಯೆ:ಪಿಎಸ್ಆರ್(ಜಿ)/963/19-20, ದಿನಾಂಕ:26.06.2019.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಲಯ) ವಿದ್ಯುತ್ ವಿಭಾಗ ರವರು 2019-20 ನೇ ಸಾಲಿನ ಅಯವ್ಯಯ ಲೆಕ್ಕ ಶಿರ್ಷಿಕೆ P-0300 ಅಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ದಾಸರಹಳ್ಳಿ ವಲಯ ವಿದ್ಯುತ್ ವಿಭಾಗಕ್ಕೆ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ.39.29 ಲಕ್ಷಗಳಿಗೆ ಕಂಡಿಕೆ (54) ರಲ್ಲಿ ಮಾನ್ಯ ವಿಶೇಷ ಆಯುಕ್ತರು (ಯೋಜನೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರು ಅನುಮೋದಿಸಿರುವ ಮೇರೆಗೆ, ಕೆ.ಪಿ.ಡಬ್ಲ್ಯೂ.ಡಿ(ವಿದ್ಯುತ್) 2019-20 ನೇ ಸಾಲಿನ ಎಸ್.ಆರ್ ದರಗಳನ್ನು ಅಳವಡಿಸಿ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರ ಆದೇಶದಂತೆ ಆಡಳಿತಾತ್ಮಕ ಮಂಜೂರಾತಿ ಮತ್ತು ಕಾಮಗಾರಿ ಸಂಕೇತ ಪಡೆದು ಸದರಿ ಕಾಮಗಾರಿಗೆ ಟೆಂಡರ್ ಕರೆಯಬೇಕಾಗಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)/ಪಿ ಆರ್/394/18-19, ದಿನಾಂಕ:04-10-2018 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಮಾನ್ಯ ಆಯುಕ್ತರು ರವರ ಟಿಪ್ಪಣಿ ಹಾಳೆಯ ಕಂಡಿಕೆ (92) ರಲ್ಲಿ ಉಲ್ಲೇಖ (01) ರಂತೆ ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ ಹಾಗೂ ಆಡಳಿತಾತ್ಮಕ ಅನುಮೋದನೆಯನ್ನು ಪುಟ ಸಂಖ್ಯೆ:-32-- ಕ್ರ.ಸಂ.-27-ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:-

1. ಅಂದಾಜು ಪಟ್ಟಿಯ ಮೊತ್ತ ರೂ.1.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
3. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೇಟಾ ದರವನ್ನು ತಯಾರಿಸಿ, ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್)
ಬೃ.ಬೆಂ.ಮ.ಪಾ. ದಾಸರಹಳ್ಳಿ ವಲಯ

Executive Engineer (Elec)
Bruhath Bangalore Mahanagara Palike
Dasarahalli Zone

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ದಾಸರಹಳ್ಳಿ ವಲಯರವರ ಮಾಹಿತಿಗಾಗಿ ಕಳುಹಿಸಿದೆ.
2. ಕಛೇರಿ ಕಡತಕ್ಕೆ.

Scanned by CamScanner